ಇ) ಬೆಳ್ತಂಗಡಿ ತಾಲ್ಲೂಕಿನ ಕೊಕ್ಕಡ ಮತ್ತು ಗೇರುಕಟ್ಟೆ ಎಂಬಲ್ಲಿ ನೂತನ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆಯ ಕುರಿತಾದ ವಿವರಗಳೇನು;

ಈ) ಎಂದಿನಿಂದ ಈ ಕ್ರಮ ಜರುಗಿಸಲಾಗುವುದು.

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಗೆ ಬರುವ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಹುದ್ದೆಗಳು.

ಬೋಧಕ ಹುದ್ದೆಗಳು 14

ಬೋಧಕೇತರ ಹುದ್ದೆಗಳು 02

ಆ) ಕ್ರಮ ಜರುಗಿಸಲಾಗುವುದು.

ಇ) ಮತ್ತು ಈ) ಇವುಗಳಲ್ಲಿ ಬೆಳ್ತಂಗಡಿ ತಾಲ್ಲೂಕಿನ ಗೇರುಕಟ್ಟೆ ಗ್ರಾಮದಲ್ಲಿ ನೂತನ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

520(880) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಪ್ರೌಢಶಾಲೆಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗಗಳ ಎಷ್ಟು ಹುದ್ದೆಗಳು ಖಾಲಿ ಇವೆ; ಅವುಗಳನ್ನು ಯಾವಾಗ ತುಂಬಲಾಗುವುದು;

ಆ) ಗ್ರಾಮಾಂತರ ಪ್ರದೇಶಗಳಲ್ಲಿ ಸಿಬ್ಬಂದಿ ಕೊರತೆಯಾಗದಂತೆ ನೋಡಿಕೊಂಡು ಶೈಕ್ಷಣಿಕ ಚಟುವಟಿಕೆ ಅನುಕೂಲ ಮಾಡಿಕೊಡಲು ಸರ್ಕಾರ ಸೂಕ್ತ ಕ್ರಮ ಜರುಗಿಸುವುದೆ;

ಇ) ಬೆಳ್ತಂಗಡಿ ತಾಲ್ಲೂಕಿನ ಕಲ್ಮಂಜ ಗ್ರಾಮದ (ನಿಡ್ಗಲ್) ಹಾಗೂ ಮಚ್ಚಿನ ಗ್ರಾಮದ (ಬಳ್ಳಮಂಜ) ಸರ್ಕಾರಿ ಪ್ರೌಢಶಾಲೆಯನ್ನು ಪ್ರಾರಂಭಿಸುವ ದೀರ್ಘ ಕಾಲದ ಪ್ರಸ್ತಾವನೆಯನ್ನು ಸರ್ಕಾರ ಜಾರಿಗೊಳಿಸುವುದೆ : ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಈ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) ಮತ್ತು ಆ) ಬೋಧಕ ಹುದ್ದೆಗಳು – 26

ಬೋಧಕೇತರ ಹುದ್ದೆಗಳು – 30

ಖಾಲಿ ಇರುವ ಬೋಧಕ ಹಾಗೂ ಲಿಪಿಕ ಬೋಧಕೇತರ ಹುದ್ದೆಗಳನ್ನು ನೇರ ನೇಮಕಾತಿ ಹಾಗೂ ಬಡ್ತಿಯ ಮುಖಾಂತರ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಇದೊಂದು ಸತತವಾದ ಪ್ರಕ್ರಿಯೆಯಾಗಿದೆ.

ಇ) ಡಾ॥ ನಂಜುಂಡಪ್ಪ ವರದಿ ಪ್ರಕಾರ ಹಿಂದುಳಿದ ತಾಲ್ಲೂಕುಗಳಲ್ಲಿ ಅಗತ್ಯತೆ ಮತ್ತು ಆಯವ್ಯಯದ ಲಭ್ಯತೆಯನ್ನು ಪರಿಗಣಿಸಿ ಹೊಸ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುತ್ತಿದೆ.

521(881) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಬೆಳ್ತಂಗಡಿ ತಾಲ್ಲೂಕು ಪ್ರದೇಶದಲ್ಲಿ ಬರುವ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಮುಖ್ಯೋಪಾಧ್ಯಾಯರುಗಳ ಸಂಖ್ಯೆ ಎಷ್ಟು? ಅವುಗಳನ್ನು ಯಾವಾಗ ತುಂಬಲು ಸರ್ಕಾರ ಕ್ರಮ ಜರುಗಿಸಲಾಗುವುದು;

ಆ) ರಾಜ್ಯ ಮಟ್ಟದಲ್ಲಿ ಖಾಲಿ ಇರುವ ಮುಖ್ಯೋಪಾಧ್ಯಾಯರ ಹುದ್ದೆಗಳನ್ನು ಈಗ ಇರುವ 75:25 ಅನುಪಾತಕ್ಕೆ ಬದಲು ನೂರಕ್ಕೆ ನೂರು ಎಂದು ಪರಿಗಣಿಸಿ ಖಾಲಿ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಸರ್ಕಾರ ಮುಂದಾಗುವುದೇ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) 1) ಬೆಳ್ತಂಗಡಿ ತಾಲ್ಲೂಕಿನಲ್ಲಿ ಒಟ್ಟು 15 ಪ್ರೌಢಶಾಲಾ ಮುಖ್ಯ ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ.

2) ಪ್ರೌಢಶಾಲಾ ಮುಖ್ಯ ಶಿಕ್ಷಕರ ಹುದ್ದೆಗಳನ್ನು ಪ್ರಸ್ತುತ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಶೇ. 50:50 ರಂತೆ ಬಡ್ತಿ/ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗುತ್ತಿದ್ದು. ಈ ನಿಯಮಗಳನ್ನು ಪರಿಷ್ಕರಿಸಲು ಕರಡು ನಿಯಮಗಳನ್ನು ರೂಪಿಸಿ ಪರಿಷ್ಕರಣೆ ಕ್ರಮ ಕೈಗೊಳ್ಳಲಾಗುತ್ತಿದ್ದು. ನಿಯಮಗಳ ಪರಿಷ್ಕರಣೆಯ ನಂತರ ಈ ಹುದ್ದೆಗಳನ್ನು ಬಡ್ತಿ/ನೇರ ನೇಮಕಾತಿ ಮೂಲಕ ನೇಮಕಾತಿ ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

ಆ) 1) ಪ್ರಸ್ತುತ ಜಾರಿಯಲ್ಲಿರುವ 1967 ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ, ಪ್ರೌಢಶಾಲಾ ಮುಖ್ಯ ಶಿಕ್ಷಕರ ಹುದ್ದೆಗಳನ್ನು ಈ ಕೆಳಗೆ ನಮೂದಿಸಿರುವ ಅನುಪಾತದಂತೆ ಭರ್ತಿ ಮಾಡಲಾಗುತ್ತಿದೆ.

i) ನೇರ ನೇಮಕಾತಿ – 50%

ii) ಗ್ರೇಡ್ 1 ಸಹಶಿಕ್ಷಕರಿಗೆ ಬಡ್ತಿ ನೀಡುವುದರ ಮೂಲಕ – 50%

2) ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದಕ್ಕೆ ಬಡ್ತಿ ನೀಡಲು ಈಗಿರುವ ನೇರ ನೇಮಕಾತಿ/ಬಡ್ತಿ ಶೇ. 50:50 ಅನುಪಾತವನ್ನು ಶೇ. 25:75 ಎಂದು ಪರಿಗಣಿಸಲು ಉದ್ದೇಶಿಸಲಾಗಿದೆ. ಅದರಂತೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

522(672) ಶ್ರೀ ಶಂಕರಲಿಂಗೇಗೌಡ (ಚಾಮರಾಜ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?